# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/574/2021-22, ದಿನಾಂಕ : 24-1-2022

ದಿನಾಂಕ: 17-01-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ. ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀಮತಿ. ಶಿಲ್ಪ.ಎನ್ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 6 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 7 | Annapurna | ಶಂಕರಪುರಂ ಪೋಲೀಸ್ ಠಾಣೆ | |
| 8 | ಶ್ರೀ.ಸುರೇಶ್ | ಹಿ.ಆ.ಪ | |
| 9 | ಶ್ರೀ.ನರಸಿಂಹ | ಕಿ.ಆ.ಪ | |

ದಿನಾಂಕ: 17-01-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ಮಾರ್ಕೆಟ್ ರಸ್ತೆ (ಪುಡ್ ಸ್ಟ್ರೀಟ್)ಯಲ್ಲಿನ ಹೋಟೆಲ್‌ಗಳಲ್ಲಿ ಆಹಾರ ಪದಾರ್ಥಗಳನ್ನು ತೆರೆದು ಬಾಕ್ಸ್‌ಗಳಲ್ಲಿ ಹಾಕಿಕೊಂಡು ಸಾರ್ವಜನಿಕರಿಗೆ ಮಾರಾಟ ಮಾಡಿತ್ತಿದ್ದು, ಇದರಿಂದ ಸಾರ್ವಜನಿಕರ(ಗ್ರಾಹಕರ) ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದ್ದು ಆಹಾರ ಪದಾರ್ಥಗಳನ್ನು ಸುರಕ್ಷಿತವಗಿ ಮುಚ್ಚಿದ ಡಬ್ಬಿಗಳಲ್ಲಿ ಶೇಖರಿಸಿ ವ್ಯಾಪಾರ ಮಾಡುವಂತೆ ಹಾಗೂ ತೆರೆದ ಡಬ್ಬಗಳಲ್ಲಿ ವ್ಯಾಪಾರ ಮಾಡುತ್ತಿರುವ ಹೋಟೆಲ್‌ನ ಮಾಲೀಕರಿಗೆ ದಂಡವನ್ನು ವಿಧಿಸುವಂತೆ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷರಿಗೆ ಮಾನ್ಯ ನೋಡಲ್ ಅಧಿಕಾರಿಗಳು ಸೂಚಿಸಿದರು. ಶ್ರೀ. ಓ.ವಿ ಜಯಕುಮಾರ್ ರವರು ಮಾತು ಮುಂದುವರೆಸುತ್ತಾ ಲಾಲ್‌ಬಾಗ್ ವೆಸ್ಟ್ ಗೇಟ್ ಮುಂಭಾಗದ ಜಂಕ್ಷನ್‌ನಲ್ಲಿ ಹೊಸದಾಗಿ ಡಾಂಬು ಹಾಕಲಾಗಿದ್ದು ಸರ್ಕಲ್ ಸುತ್ತಲೂ ಪಾದಚಾರಿಗಳಿಗೆ ಅನುಕೂಲವಾಗುವಂತೆ ರಸ್ತೆ ದಾಟಲು "Zebra crossing" ಅಳವಡಿಸಬೇಕೆಂದು ಸಭೆಯ ಗಮನಕ್ಕೆ ತಂದರು, ಈ ವಿಷಯವಾಗಿ ಮಾನ್ಯ ನೋಡಲ್ ಅಧಿಕಾರಿಗಳ ಮೊಬೈಲ್ ಫೋನ್ ಮುಖಾಂತರ ಟ್ರಾಫಿಕ್ ಇಂಜಿಯರಿಂಗ್ ಸೆಲ್ (TEC) ನ ಅಧಿಕಾರಿಗಳನ್ನು ಸಂಪರ್ಕಿಸಿ "Zebra crossing" ಅನ್ನು ಅಳವಡಿಸುವ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು. ಶ್ರೀ.ಓ.ವಿ.ಜಯಕುಮಾರ್ ರವರು ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಕೋರಿದರು. ಮಾನ್ಯ ನೋಡಲ್ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಎಂ.ಎಂ.ವಿ. ರಸ್ತೆ ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ವೆಂಕಟೇಶ್ ರವರು ಮಾತನಾಡಿ ಈ ಕೆಳಕಂಡ ವಿಷಯಗಳನ್ನು ಸಭೆಯ ಗಮನಕ್ಕೆ ತಂದು ಸೂಕ್ತ ಕ್ರಮವಹಿಸಬೇಕೆಂದು ತಿಳಿಸಿದರು, ಅವುಗಳೆಂದರೆ:–

- ಸಜ್ಜನ್‌ರಾವ್ ವೃತ್ತದ ಬಳಿಯಲ್ಲಿರುವ ಐಲ್ಯಾಂಡ್‌ನಲ್ಲಿ ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕುವುದನ್ನು ಪಡೆಯಲು ಮಾರ್ಷಲ್‌ಗಳನ್ನು ನೇಮಿಸುವುದು.
- ನ್ಯಾಷನಲ್ ಹೈ ಸ್ಕೂಲ್ ರಸ್ತೆ ಹಾಗೂ ಎಂ.ಎಂ.ವಿ.ರಸ್ತೆಗಳು ಸೇರುವ ಸ್ಥಳದಲ್ಲಿ ರಸ್ತೆ ಉಬ್ಬು (Road Hump) ನ್ನು ಹಾಕುವುದು.
- ವಾರ್ಡ್ ವ್ಯಾಪ್ತಿಯಲ್ಲಿ ರಾತ್ರಿ ವೇಳೆಯಲ್ಲಿ ಕೆಲವು ದುಷ್ಕರ್ಮಿಗಳು ಕಟ್ಟಡ ಅವಶೇಷ (ಡಬ್ರೀಸ್) ಗಳನ್ನು ಎಲ್ಲೆಂದರಲ್ಲಿ ಸುರಿಯುತ್ತಿದ್ದು ರಾತ್ರಿ ಪಾಳಿಯಲ್ಲಿ ಗಸ್ತನ್ನು ಹೆಚ್ಚಿಸುವಂತೆ ಪೊಲೀಸ್ ಇಲಾಖೆಗೆ ಪತ್ರವನ್ನು ಬರೆಯುವುದು.
- ವಾರ್ಡ್ ಕಮಿಟಿ ಮೀಟಿಂಗ್‌ಗೆ ಪೊಲೀಸ್ ಇಲಾಖೆಯ ಟ್ರಾಫಿಕ್, ಕಾನೂನು ಸುವ್ಯವಸ್ಥೆ ಮತ್ತು ಇತರೆ ಇಲಾಖೆಗಳ ಅಧಿಕಾರಿಗಳು ಭಾಗವಹಿಸುವಂತೆ ಕ್ರಮ ವಹಿಸುವುದು.

2021–22 ನೇ ಸಾಲಿನ ಅಯ್ಯವಯದಲ್ಲಿ ಅನುಮೋದನೆಗೊಂಡ POW ಕಾಮಗಾರಿ ಕೈಗೊಳ್ಳುವ ಸಂಬಂಧ ಈ ಕೆಳಕಂಡ ಕಾಮಗಾರಿಗೆ ವಾರ್ಡ್ ಸಮಿತಿ ಸಭೆಯಲ್ಲಿ ಅನುಮೋದಿಸುವಂತೆ ಕೋರಿದೆ.

| | | |
|---|---|---|
| 1 | Filling of potholes in ward no. 143 | 20.00 lakhs |
| 2 | Improvement of footpath in ward no. 143 | 20.00 lakhs |
| 3 | Digging of borewells in ward no. 143 | 20.00 lakhs |
| | Total | 60.00 lakhs |

ಈ ಮೇಲಿನ ಎಲ್ಲಾ ವಿಷಯಗಳ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಚರ್ಚಿಸಿ ಸಂಬಂಧ ಪಟ್ಟ ಇಲಾಖೆಗಳಾದ ಆರೋಗ್ಯ ವೈದ್ಯಾಧೀಕಾರಿಗಳು, ರಸ್ತೆ ಮತ್ತು ಮೂಲಬೂತ ಸೌಕರ್ಯ ವಿಭಾಗದ ಅಧಿಕಾರಿಗಳು, ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ವಿಭಾಗ ಮತ್ತು ಪೊಲೀಸ್ ಇಲಾಖೆಗಳಿಗೆ ಪತ್ರ ಬರೆದು ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಲಾಗುವುದೆಂದು ಸಭೆಯ ಗಮನಕ್ಕೆ ತಂದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)